ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುವ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಕುರಿತು

ಶ್ರೀ ಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು):-

134 (136) ಮಾನ್ಯ ಪೌರಾಡಳಿ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳ್ಳುವ ``ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ'' ಯೋಜನೆಯಡಿ ವರ್ಷದ ಮಧ್ಯದಲ್ಲಿ ಹಲವು ಬಾರಿ ಮಾರ್ಗಸೂಚಿ ಬದಲಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾರ್ಗಸೂಚಿ ಬದಲಾವಣೆ ಮಾಡಿರುವುದರಿಂದ ರೈತರಿಗೆ ಸಹಾಯಧನ ಪಡೆಯಲು ಕಷ್ಟವಾಗುತ್ತಿದ್ದು, ಈ ಮಾರ್ಗಸೂಚಿ ಬದಲಾವಣೆ ಪದೇ ಪದೇ ಮಾಡಲು ಕಾರಣಗಳೇನು ;

(ಇ) ತೋಟಗಾರಿಕೆ ಯಾಂತ್ರೀಕರಣ ಯೋಜನೆಯಡಿ ಸರ್ಕಾರದ ವತಿಯಿಂದ ಬರುವ ಅನುದಾನವೆಷ್ಟು ; ಹಲವು ವರ್ಷಗಳಿಂದ ಸದರಿ ಯೋಜನೆಗೆ ಅನುದಾನ ಬಾರದಿರುವುದರಿಂದ ಯೋಜನೆ ಕುಂಠಿತಗೊಳ್ಳುತ್ತಿದ್ದು ರೈತರಿಗೆ ಸಹಾಯಧನ ದೊರಕುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅನುದಾನವನ್ನು ವರ್ಷಕ್ಕೆ ಸರಿಯಾಗಿ ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸದರಿ ಯೋಜನೆಯನ್ನು ಜಾರಿಗೆ ತರಲು ಹಲವಾರು ಲೋಪದೋಷಗಳಿದ್ದು ಅವುಗಳನ್ನು ಸರಿಪಡಿಸಲು ರೈತರಿಗೆ ಸಹಾಯಧನ ದೊರಕಿಸುವಲ್ಲಿ ಸರ್ಕಾರ ತೆಗೆದುಕೊಂಡ ಕಟ್ಟುನಿಟ್ಟಿನ ಕ್ರಮಗಳೇನು?